ವಿಷಯ:- ಸಿಗಡಿ ಕೃಷಿಕರ ವಿಚಾರ.

168(21)

ಶ್ರೀ ವಸಂತ ವಿ. ಸಾಲಿಯಾನ್ (ಕಾಪು):- ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಸಿಗಡಿ ಕೃಷಿಯು ವಿಚಾರವಾಗಿ ಭಾರತದ ಸರ್ವೋಚ್ಚ ನ್ಯಾಯಾಲಯದ ತೀರ್ಪಿನನ್ವಯ ರಾಜ್ಯದಲ್ಲಿ ಉದ್ಭವಿಸಿದ ಬಿಕ್ಕಟ್ಟನ್ನು ಪರಿಹರಿಸುವಲ್ಲಿ ಹಾಗೂ ಸಿಗಡಿ ಕೃಷಿಯನ್ನೇ ಅವಲಂಭಿಸಿರುವ ಉದ್ಯಮಿಗಳ ಹಾಗೂ ನೌಕರರ ಹಿತ ಕಾಪಾಡುವಲ್ಲಿ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):-

ಅ) ಸರ್ವೋಚ್ಚ ನ್ಯಾಯಾಲಯದ ದಿನಾಂಕ 11-12-1996ರ ತೀರ್ಪಿನಿಂದ ಉದ್ಭವಿಸಿದ ಬಿಕ್ಕಟ್ಟನ್ನು ಪರಿಹರಿಸಲು ಸರ್ವೋಚ್ಚ ನ್ಯಾಯಾಲಯದಲ್ಲಿ ಸದರಿ ತೀರ್ಪಿನ ವಿರುದ್ಧ ಪುನರ್ ಪರಿಶೀಲನಾ ಮೇಲ್ಮನವಿಯನ್ನು ಸಲ್ಲಿಸಲಾಗಿದೆ. ಈ ಪುನರ್ ಪರಿಶೀಲನಾ ಮೇಲ್ಮನವಿಯು ಇನ್ನೂ ತೀರ್ಮಾನವಾಗಿರುವುದಿಲ್ಲ.

ವಿಷಯ:- ಉಡುಪಿ-ಮಂಗಳೂರು ಜೋಡಿ ರಸ್ತೆ ನಿರ್ಮಾಣ ಕಾಮಗಾರಿ ಕುರಿತು.

169(22)

ಶ್ರೀ ವಸಂತ ವಿ. ಸಾಲಿಯಾನ (ಕಾಪು):- ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಉಡುಪಿ-ಮಂಗಳೂರು ಜೋಡಿ ರಸ್ತೆ ನಿರ್ಮಾಣ ಕಾಮಗಾರಿಯು ಯಾವ ಹಂತದಲ್ಲಿದೆ;

ಆ) ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಇ) ಈ ಯೋಜನಾ ಕಾಮಗಾರಿಗೆ ಕೇಂದ್ರ ಸರ್ಕಾರದವರ ಅನುದಾನವೆಷ್ಟು? ಹಾಗೂ ರಾಜ್ಯ ಸರ್ಕಾರದ ಪಾಲು ಎಷ್ಟು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):-

ಅ) ಸದರಿ ಪ್ರಸ್ತಾವನೆಯನ್ನು 9ನೇ ಪಂಚವಾರ್ಷಿಕ ಯೋಜನೆ (1997-2002) ಯಲ್ಲಿ ಸೇರಿಸಿ ಕೇಂದ್ರ ಸಾರಿಗೆ ಸಚಿವಾಲಯಕ್ಕೆ ಪ್ರಸ್ತಾವಿಸಲಾಗಿದೆ.

ಆ) ಸರಿ ಕಾಮಗಾರಿಯು ಅನುಮೋದಿತ ವಾರ್ಷಿಕ ಯೋಜನೆಯಲ್ಲಿ ಸೇರಿದ ನಂತರ ಹಾಗೂ ಸಾರಿಗೆ ಸಚಿವಾಲಯದವರ ಅನುಮೋದನೆ ದೊರೆತನಂತರ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಇ) ಇದು ರಾಷ್ಟ್ರೀಯ ಹೆದ್ದಾರಿಯಾಗಿದ್ದು, ಪ್ರಸ್ತಾವನೆಯನ್ನು ಪೂರ್ಣ ಕೇಂದ್ರ ಸರ್ಕಾರದವರ ಅನುದಾನದಲ್ಲಿ ಕೈಗೆತ್ತಿಕೊಳ್ಳಲು ಪ್ರಸ್ತಾಪಿಸಲಾಗಿದೆ.